All India Radio: Bangalore
National Bulletin In Kannada
06.11.2026 07.35 a.m.
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು
06.11.2026 07.35 a.m.

ಮುಖ್ಯಾಂಶಗಳು

೧. 'ರಾಷ್ಟ್ರವ್ಯಾಪಿ ಡಿಜಿಟಲ್ ಜೀವ ಪ್ರಮಾಣ ಪತ್ರ' ಅಭಿಯಾನದ ೫ನೇ ಆವೃತ್ತಿಗೆ ಇಂದು ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್ ಚಾಲನೆ

೨. ಆಂಟಿಗುವಾ ಮತ್ತು ಬಾರ್ಬುಡಾ ಪ್ರಧಾನಿಯೊಂದಿಗೆ ಕೇಂದ್ರ ಸಚಿವ ಡಾ.ಎಸ್.ಜೈಶಂಕರ್ ದ್ವಿಪಕ್ಷೀಯ ಮಾತುಕತೆ

೩. ರಷ್ಯಾ-ಉಕ್ರೇನ್ ನಡುವಿನ ಶಾಂತಿ ಒಪ್ಪಂದ ಶೀಘ್ರ ಅಂತಿಮ -ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿಶ್ವಾಸ

೪. ಹೀರೋ ಏಷ್ಯನ್ ಹಾಕಿ ಚಾಂಪಿಯನ್‌ಶಿಪ್: ಸತತ ೬ನೇ ಬಾರಿಗೆ ಪ್ರಶಸ್ತಿ ಮುಡಿಗೇರಿಸಿಕೊಂಡ ಭಾರತ

೫. ಬೇಸಿಗೆ ಯುವ ಒಲಿಂಪಿಕ್ಸ್: ಬ್ಯಾಡ್ಮಿಂಟನ್‌ನ ಸಿಂಗಲ್ಸ್ ವಿಭಾಗದಲ್ಲಿ ಭಾರತದ ತನ್ವಿ ಪತ್ರಿಗೆ ಬೆಳ್ಳಿ

ನವದೆಹಲಿಯಲ್ಲಿ ಇಂದು 'ರಾಷ್ಟ್ರವ್ಯಾಪಿ ಡಿಜಿಟಲ್ ಜೀವ ಪ್ರಮಾಣ ಪತ್ರ' ಅಭಿಯಾನದ ೫ನೇ ಆವೃತ್ತಿಗೆ ಕೇಂದ್ರ ಸಿಬ್ಬಂದಿ, ಸಾರ್ವಜನಿಕ ಕುಂದು-ಕೊರತೆಗಳು ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಚಾಲನೆ ನೀಡಲಿದ್ದಾರೆ.

ಕೇಂದ್ರ ಪಿಂಚಣಿ ಮತ್ತು ಪಿಂಚಣಿದಾರರ ಕಲ್ಯಾಣ ಇಲಾಖೆಯು ಆಯೋಜಿಸಿರುವ ಈ ಅಭಿಯಾನವು ಒಂದು ತಿಂಗಳ ಕಾಲ ನಡೆಯಲಿದ್ದು, ಈ ತಿಂಗಳ ೩೦ರವರೆಗೆ ದೇಶಾದ್ಯಂತ ಮುಂದುವರಿಯಲಿದೆ.

ಡಿಜಿಟಲ್ ತಂತ್ರಜ್ಞಾನದ ಮೂಲಕ, ವಿಶೇಷವಾಗಿ 'ಜೀವನ್ ಪ್ರಮಾಣ್' ಆಪ್‌ನಲ್ಲಿರುವ 'ಮುಖ ಗುರುತಿಸುವಿಕೆ' ತಂತ್ರಜ್ಞಾನವನ್ನು ಬಳಸಿಕೊಂಡು, ಪಿಂಚಣಿದಾರರು ತಮ್ಮ ಜೀವ ಪ್ರಮಾಣ ಪತ್ರಗಳನ್ನು ಸಲ್ಲಿಸುವ ಪ್ರಕ್ರಿಯೆಯನ್ನು ಹೆಚ್ಚು ಸುಲಭ, ಅನುಕೂಲಕರ ಮತ್ತು ಸಮಸ್ಯೆ ಮುಕ್ತವಾಗಿಸುವುದು ಈ ಉಪಕ್ರಮದ ಉದ್ದೇಶವಾಗಿದೆ ಎಂದು ಸಚಿವಾಲಯ ತಿಳಿಸಿದೆ.

ಸಾರ್ವಜನಿಕ ವಲಯದ ಬ್ಯಾಂಕುಗಳು, ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್, ಯುಐಡಿಎಐ, ಪಿಂಚಣಿದಾರರ ಕಲ್ಯಾಣ ಸಂಘಗಳು ಹಾಗೂ ಪ್ರಮುಖ ಸಚಿವಾಲಯಗಳು ಮತ್ತು ಇಲಾಖೆಗಳ ಸಹಯೋಗದೊಂದಿಗೆ ಈ ಅಭಿಯಾನ ನಡೆಸಲಾಗುತ್ತಿದೆ.

೮೦ ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ವಯಸ್ಸಿನ ಹಿರಿಯ ಪಿಂಚಣಿದಾರರು, ಮಹಿಳಾ ಪಿಂಚಣಿದಾರರು ಮತ್ತು ಆರೋಗ್ಯ ಸಂಬಂಧಿತ ಸಮಸ್ಯೆಗಳನ್ನು ಎದುರಿಸುತ್ತಿರುವವರಿಗೆ ವಿಶೇಷ ಆದ್ಯತೆ ನೀಡಲಾಗುವುದು. ವಯಸ್ಸು ಅಥವಾ ಅನಾರೋಗ್ಯದ ಕಾರಣದಿಂದಾಗಿ ಅಭಿಯಾನ ನಡೆಯುವ ಸ್ಥಳಗಳಿಗೆ ಭೇಟಿ ನೀಡಲು ಸಾಧ್ಯವಾಗದ ಪಿಂಚಣಿದಾರರಿಗೆ, ಅವರ ಮನೆ ಬಾಗಿಲಲ್ಲೇ ಸೇವೆಗಳನ್ನು ಒದಗಿಸುವ ವ್ಯವಸ್ಥೆಯನ್ನೂ ಕಲ್ಪಿಸಲಾಗುವುದು ಎಂದು ಸಚಿವಾಲಯ ಮಾಹಿತಿ ನೀಡಿದೆ.

ಕಾಮನ್‌ವೆಲ್ತ್ ಸರ್ಕಾರಿ ಮುಖ್ಯಸ್ಥರ ಸಭೆ ಸಂದರ್ಭದಲ್ಲಿ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರು ಆಂಟಿಗುವಾ ಮತ್ತು ಬಾರ್ಬುಡಾ ಪ್ರಧಾನಿ ಗ್ಯಾಸ್ಟನ್ ಬ್ರೌನ್ ಅವರನ್ನು ಭೇಟಿಯಾಗಿ ವ್ಯಾಪಾರ ಮತ್ತು ಹೂಡಿಕೆ, ನವೀಕರಿಸಬಹುದಾದ ಇಂಧನ ಮತ್ತು ಆಹಾರ ಸಂಸ್ಕರಣೆಯಲ್ಲಿ ದ್ವಿಪಕ್ಷೀಯ ಸಹಕಾರ ವಿಸ್ತರಿಸುವ ಮಾರ್ಗಗಳ ಕುರಿತು ಚರ್ಚಿಸಿದರು.

ಇದಕ್ಕೂ ಮುನ್ನ ಜೈಶಂಕರ್ ಅವರು, ಆಂಟಿಗುವಾ ಮತ್ತು ಬಾರ್ಬುಡಾ ವಿದೇಶಾಂಗ ಸಚಿವ ಚೆಟ್ ಗ್ರೀನ್ ಅವರೊಂದಿಗೆ ಆರೋಗ್ಯ ರಕ್ಷಣೆ, ಶಿಕ್ಷಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳು, ತರಬೇತಿ ಮತ್ತು ಸಾಮರ್ಥ್ಯ ವೃದ್ಧಿಯಲ್ಲಿ ಸಹಕಾರ ಬಲಪಡಿಸುವ ಕುರಿತು ಮಾತುಕತೆ ನಡೆಸಿದರು.

ಕಾಮನ್‌ವೆಲ್ತ್ ಪಾಲುದಾರರ ಸಭೆಯಲ್ಲಿ ಮಾತನಾಡಿದ ಡಾ. ಎಸ್.ಜೈಶಂಕರ್, ಅನಿಶ್ಚಿತ ಜಗತ್ತಿನಲ್ಲಿ, ದೇಶಗಳು ಕಡಿಮೆ, ಹೆಚ್ಚು ವಿಶ್ವಾಸಾರ್ಹ ಪೂರೈಕೆ ಸರಪಳಿಗಳನ್ನು ನಿರ್ಮಿಸುವ ಮೂಲಕ ತಮ್ಮ ಆರ್ಥಿಕತೆಯನ್ನು ಅಪಾಯದಿಂದ ಮುಕ್ತಗೊಳಿಸಬೇಕು ಎಂದು ಒತ್ತಿ ಹೇಳಿದರು.

ಉತ್ತಮ ಸಂಪರ್ಕ ಕಾರಿಡಾರ್‌ಗಳು ಮತ್ತು ಬಲವಾದ ಸ್ಥಳೀಯ ವಿತರಣಾ ಜಾಲಗಳು ವ್ಯಾಪಾರ ಮತ್ತು ವ್ಯವಹಾರಕ್ಕೆ ಹೊಸ ಬಾಗಿಲುಗಳನ್ನು ತೆರೆಯಬಹುದು ಎಂದು ಅವರು ಅಭಿಪ್ರಾಯಪಟ್ಟರು.

ಪ್ರಪಂಚದಾದ್ಯಂತ ಹರಡಿರುವ ಭಾರತೀಯ ವ್ಯಾಪಾರ ಸಮುದಾಯವು ಕಾಮನ್‌ವೆಲ್ತ್‌ಗೆ ಒಂದು ಆಸ್ತಿ ಎಂದು ಸಚಿವ ಡಾ. ಎಸ್.ಜೈಶಂಕರ್ ಪ್ರತಿಪಾದಿಸಿದರು.

೨೦೩೦ರ ವೇಳೆಗೆ ಪಳೆಯುಳಿಕೆ ಇಂಧನವಲ್ಲದ ಮೂಲಗಳಿಂದ ೧೯೦ ಗಿಗಾವ್ಯಾಟ್ ವಿದ್ಯುತ್ ಉತ್ಪಾದನಾ ಸಾಮರ್ಥ್ಯ ಸೇರ್ಪಡೆಗೆ ಭಾರತ ೨೨೦ ಶತಕೋಟಿ ಡಾಲರ್ ಹೂಡಿಕೆಯ ಗುರಿ ಹೊಂದಿದ್ದು, ಅದನ್ನು ಮೀರುವ ನಿರೀಕ್ಷೆಯಿದೆ ಎಂದು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

'ಭಾರತ ನವೀಕರಿಸಬಹುದಾದ ಇಂಧನ ಶೃಂಗಸಭೆ ೨೦೨೬' ಸಮಾರೋಪ ಸಂದರ್ಭದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಳೆದ ಎರಡು ವರ್ಷಗಳಲ್ಲಿ ದೇಶೀಯ ನಿಧಿಗಳು ಮತ್ತು ವಿದೇಶಿ ನೇರ ಹೂಡಿಕೆ ಸೇರಿದಂತೆ ಒಟ್ಟು ೭ ಲಕ್ಷ ಕೋಟಿ ರೂಪಾಯಿಗಳಷ್ಟು ಹೂಡಿಕೆಯು ನವೀಕರಿಸಬಹುದಾದ ಇಂಧನ ವಲಯಕ್ಕೆ ಹರಿದುಬಂದಿದೆ ಎಂದು ಹೇಳಿದರು.

ಈ ವೇಗವು ಮುಂದುವರಿಯಲಿದ್ದು, ಭಾರತ ೫೦೦ ಗಿಗಾವ್ಯಾಟ್ ಗುರಿಯನ್ನು ನಿಗದಿತ ಸಮಯದಲ್ಲೇ ತಲುಪಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ ನಿರ್ದೇಶನದ ಮೇರೆಗೆ, ಹೆಚ್ಚುವರಿಯಾಗಿ ೩೦೦ ಗಿಗಾವ್ಯಾಟ್ ಸಾಮರ್ಥ್ಯವನ್ನು ಸೇರಿಸಲು ಕಾರ್ಯತಂತ್ರಗಳನ್ನು ರೂಪಿಸಲಾಗುತ್ತಿದೆ ಎಂದು ಅವರು ತಿಳಿಸಿದರು.

ಪ್ರಸ್ತುತ ದೇಶದಲ್ಲಿ ಪಳೆಯುಳಿಕೆ ಇಂಧನವಲ್ಲದ ಮೂಲಗಳಿಂದ ೩೧೦ ಗಿಗಾವ್ಯಾಟ್ ವಿದ್ಯುತ್ ಉತ್ಪಾದನಾ ಸಾಮರ್ಥ್ಯವಿದ್ದು, ೨೦೩೦ರ ವೇಳೆಗೆ ಇದನ್ನು ೫೦೦ ಗಿಗಾವ್ಯಾಟ್‌ಗೆ ಏರಿಸುವ ಗುರಿಯನ್ನು ಕೇಂದ್ರ ಸರ್ಕಾರ ನಿಗದಿಪಡಿಸಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಮಾಹಿತಿ ನೀಡಿದರು.

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ-ಡಿಆರ್‌ಡಿಒ, ಒಡಿಶಾ ಕರಾವಳಿಯ ಡಾ. ಎ.ಪಿ.ಜೆ.ಅಬ್ದುಲ್ ಕಲಾಂ ದ್ವೀಪದಿಂದ ಸ್ವದೇಶಿ ನಿರ್ಮಿತ ಅರೆ-ಬ್ಯಾಲಿಸ್ಟಿಕ್ ಕ್ಷಿಪಣಿ 'ಪ್ರಳಯ್'ನ ಪರೀಕ್ಷಾರ್ಥ ಹಾರಾಟವನ್ನು ಯಶಸ್ವಿಯಾಗಿ ನಡೆಸಿದೆ.

ಹೈದರಾಬಾದ್‌ನ ರಿಸರ್ಚ್ ಸೆಂಟರ್ ಇಮಾರತ್ ಹಾಗೂ ಡಿಆರ್‌ಡಿಒ ದ ಇತರ ಪ್ರಯೋಗಾಲಯಗಳು ಜಂಟಿಯಾಗಿ ಈ ಕ್ಷಿಪಣಿಯನ್ನು ಅಭಿವೃದ್ಧಿಪಡಿಸಿವೆ. ಚಂಡೀಪುರದ ಸಮಗ್ರ ಪರೀಕ್ಷಾ ವಲಯದ ವಿವಿಧ ಉಪಕರಣಗಳು ಸಂಗ್ರಹಿಸಿದ ದತ್ತಾಂಶವು ಪರೀಕ್ಷೆಯ ಎಲ್ಲ ಉದ್ದೇಶಗಳು ಯಶಸ್ವಿಯಾಗಿ ಈಡೇರಿರುವುದನ್ನು ದೃಢಪಡಿಸಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಈ ಯಶಸ್ವಿ ಪರೀಕ್ಷೆಯೊಂದಿಗೆ ಕ್ಷಿಪಣಿ ವ್ಯವಸ್ಥೆಯನ್ನು ರಕ್ಷಣಾ ಪಡೆಗಳಿಗೆ ಸೇರ್ಪಡೆಗೊಳಿಸುವ ಪ್ರಕ್ರಿಯೆ ಶೀಘ್ರದಲ್ಲೇ ಆರಂಭವಾಗುವ ನಿರೀಕ್ಷೆಯಿದೆ.

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ-ಡಿಆರ್‌ಡಿಒ, ಒಡಿಶಾ ಕರಾವಳಿಯ ಡಾ. ಎ.ಪಿ.ಜೆ.ಅಬ್ದುಲ್ ಕಲಾಂ ದ್ವೀಪದಿಂದ ಸ್ವದೇಶಿ ನಿರ್ಮಿತ ಅರೆ-ಬ್ಯಾಲಿಸ್ಟಿಕ್ ಕ್ಷಿಪಣಿ 'ಪ್ರಳಯ್'ನ ಪರೀಕ್ಷಾರ್ಥ ಹಾರಾಟವನ್ನು ಯಶಸ್ವಿಯಾಗಿ ನಡೆಸಿದೆ.

ಹೈದರಾಬಾದ್‌ನ ರಿಸರ್ಚ್ ಸೆಂಟರ್ ಇಮಾರತ್ ಹಾಗೂ ಡಿಆರ್‌ಡಿಒ ದ ಇತರ ಪ್ರಯೋಗಾಲಯಗಳು ಜಂಟಿಯಾಗಿ ಈ ಕ್ಷಿಪಣಿಯನ್ನು ಅಭಿವೃದ್ಧಿಪಡಿಸಿವೆ. ಚಂಡೀಪುರದ ಸಮಗ್ರ ಪರೀಕ್ಷಾ ವಲಯದ ವಿವಿಧ ಉಪಕರಣಗಳು ಸಂಗ್ರಹಿಸಿದ ದತ್ತಾಂಶವು ಪರೀಕ್ಷೆಯ ಎಲ್ಲ ಉದ್ದೇಶಗಳು ಯಶಸ್ವಿಯಾಗಿ ಈಡೇರಿರುವುದನ್ನು ದೃಢಪಡಿಸಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಈ ಯಶಸ್ವಿ ಪರೀಕ್ಷೆಯೊಂದಿಗೆ ಕ್ಷಿಪಣಿ ವ್ಯವಸ್ಥೆಯನ್ನು ರಕ್ಷಣಾ ಪಡೆಗಳಿಗೆ ಸೇರ್ಪಡೆಗೊಳಿಸುವ ಪ್ರಕ್ರಿಯೆ ಶೀಘ್ರದಲ್ಲೇ ಆರಂಭವಾಗುವ ನಿರೀಕ್ಷೆಯಿದೆ.

ಪರೀಕ್ಷೆಯ ಯಶಸ್ಸು ದೇಶದ ಸ್ವದೇಶಿ ರಕ್ಷಣಾ ಸಾಮರ್ಥ್ಯವನ್ನು ಬಲಪಡಿಸುವ ನಿಟ್ಟಿನಲ್ಲಿ ಮತ್ತೊಂದು ಮಹತ್ವದ ಮೈಲಿಗಲ್ಲಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ.

ಇದೇ ವೇಳೆ ರಕ್ಷಣಾ ಕಾರ್ಯದರ್ಶಿ ಹಾಗೂ ಡಿಆರ್‌ಡಿಒ ಅಧ್ಯಕ್ಷ ರಾಜೇಶ್ ಕುಮಾರ್ ಸಿಂಗ್ ಅವರು ಪರೀಕ್ಷೆಯಲ್ಲಿ ಭಾಗಿಯಾದ ತಂಡಗಳನ್ನು ಅಭಿನಂದಿಸಿದ್ದಾರೆ.

ಕೇರಳದ ಶಬರಿಮಲೆ ಶ್ರೀ ಧರ್ಮ ಶಾಸ್ತಾ ದೇವಾಲಯದ ಗರ್ಭಗುಡಿಯು, 'ಶ್ರೀ ಚಿತ್ರ ಆಟ್ಟ ತಿರುನಾಳ್'ಗೆ ಸಂಬಂಧಿಸಿದ ವಿಶೇಷ ವಿಧಿ-ವಿಧಾನಗಳಿಗಾಗಿ ಇಂದು ಸಂಜೆ ತೆರೆಯಲಿದೆ.

'ಶ್ರೀ ಚಿತ್ರ ಆಟ್ಟ ತಿರುನಾಳ್' ಹಬ್ಬವನ್ನು ನಾಳೆ ಶಬರಿಮಲೆಯಲ್ಲಿ ಆಚರಿಸಲಾಗುತ್ತದೆ.ಈ ಹಬ್ಬದ ವಿಶೇಷ ವಿಧಿ-ವಿಧಾನಗಳು ಪೂರ್ಣಗೊಂಡ ನಂತರ, ನಾಳೆ ರಾತ್ರಿ ೧೦ ಗಂಟೆಗೆ ಗರ್ಭಗುಡಿಯು ಮುಚ್ಚಲಾಗುತ್ತದೆ. ನಂತರ, ವಾರ್ಷಿಕ ಯಾತ್ರಾ ಋತು ಆರಂಭವಾಗುವುದರ ಅಂಗವಾಗಿ, ಈ ತಿಂಗಳ ೧೬ರಂದು ದೇವಾಲಯ ಮತ್ತೆ ತೆರೆಯಲಿದೆ.

ಇತ್ತೀಚೆಗೆ ಅಪ್ಪಳಿಸಿದ 'ಮುರಸು' ಚಂಡಮಾರುತದ ಬಳಿಕ ನಾಪತ್ತೆಯಾಗಿರುವ ಮೀನುಗಾರರ ಪತ್ತೆಗಾಗಿ ಭಾರತೀಯ ಕರಾವಳಿ ಕಾವಲು ಪಡೆ, ಬೃಹತ್ ಶೋಧ ಕಾರ್ಯಾಚರಣೆ ಆರಂಭಿಸಿದೆ.

ಆಂಧ್ರಪ್ರದೇಶದ ಒಂಗೋಲ್‌ನ ಕೋತಪಟ್ನಂ ಕರಾವಳಿಯಲ್ಲಿ ತಮಿಳುನಾಡಿನ ಮೂವರು ಮೀನುಗಾರರ ಮೃತದೇಹಗಳು ತೀರಕ್ಕೆ ಕೊಚ್ಚಿಬಂದಿವೆ. ಮತ್ತೊಬ್ಬ ಮೀನುಗಾರನ ಮೃತದೇಹವನ್ನು ಭಾರತೀಯ ಕರಾವಳಿ ಕಾವಲು ಪಡೆ ಸಮುದ್ರದಲ್ಲಿ ಪತ್ತೆಹಚ್ಚಿದೆ.

ದೋಣಿಯಲ್ಲಿದ್ದ ಒಂಬತ್ತು ಮೀನುಗಾರರ ಪೈಕಿ ಉಳಿದ ಐವರು ಮೀನುಗಾರರಿಗಾಗಿ ಶೋಧ ಕಾರ್ಯಾಚರಣೆ ಮುಂದುವರಿದಿದೆ.

ಇದೇ ವೇಳೆ, ಮೀನುಗಾರರ ಸಾವಿಗೆ ತಮಿಳುನಾಡು ಮುಖ್ಯಮಂತ್ರಿ ಜೋಸೆಫ್ ವಿಜಯ್ ಸಂತಾಪ ಸೂಚಿಸಿದ್ದು, ಮೃತರ ಕುಟುಂಬಗಳಿಗೆ ತಲಾ ೭ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಈ ಪೈಕಿ ೨ ಲಕ್ಷ ರೂಪಾಯಿಗಳನ್ನು ತಕ್ಷಣವೇ ಬಿಡುಗಡೆ ಮಾಡಲು ಆದೇಶಿಸಿದ್ದಾರೆ.

ಮೊಹಾಲಿಯ ಒಲಿಂಪಿಯನ್ ಬಲ್ಬೀರ್ ಸಿಂಗ್ ಸೀನಿಯರ್ ಅಂತಾರಾಷ್ಟ್ರೀಯ ಹಾಕಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ೯ನೇ ಹೀರೋ ಏಷ್ಯನ್ ಹಾಕಿ ಚಾಂಪಿಯನ್‌ಶಿಪ್‌ನ ಫೈನಲ್ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಭಾರತ ತಂಡ, ಜಪಾನ್ ವಿರುದ್ಧ ೪-೧ ಗೋಲುಗಳ ಅಂತರದಲ್ಲಿ ಭರ್ಜರಿ ಗೆಲುವು ಸಾಧಿಸಿದೆ. ಈ ಗೆಲುವಿನೊಂದಿಗೆ ಭಾರತ ೬ನೇ ಬಾರಿಗೆ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದೆ.

ಹಾಕಿ ಆಟಗಾರರ ಈ ಸಾಧನೆಯನ್ನು ದೀಪಾವಳಿ ಹಬ್ಬದ ಮುನ್ನ ರಾಷ್ಟ್ರಕ್ಕೆ ನೀಡಿದ ಉಡುಗೊರೆ ಎಂದು ಸಂಭ್ರಮಿಸಿದ ಅಭಿಮಾನಿಗಳು, ವಿಜಯೋತ್ಸವ ಆಚರಿಸಿದರು.

ಸೆನೆಗಲ್‌ನ ಡಕಾರ್‌ನಲ್ಲಿ ನಡೆದ ೨೦೨೬ರ ಬೇಸಿಗೆ ಯುವ ಒಲಿಂಪಿಕ್ಸ್‌ನ ಬ್ಯಾಡ್ಮಿಂಟನ್ ಸ್ಪರ್ಧೆಯ ಸಿಂಗಲ್ಸ್ ವಿಭಾಗದಲ್ಲಿ ಭಾರತದ ತನ್ವಿ ಪತ್ರಿ ಬೆಳ್ಳಿ ಪದಕ ವಿಜೇತರಾಗಿದ್ದಾರೆ.

ಈ ಸಾಧನೆ ಮಾಡಿದ ಮೊದಲ ಭಾರತೀಯ ಮಹಿಳೆ ಎಂಬ ಹೆಗ್ಗಳಿಕೆಗೆ ಪಾತ್ರರಾಗುವ ಮೂಲಕ ಇತಿಹಾಸ ಸೃಷ್ಟಿಸಿದ್ದಾರೆ.

ದೀಪಾವಳಿ ಹಬ್ಬದ ಅಂಗವಾಗಿ ಉತ್ತರ ಪ್ರದೇಶದ ಅಯೋಧ್ಯೆಯಲ್ಲಿ ನಡೆಯಲಿರುವ ದೀಪೋತ್ಸವದ ಸಿದ್ಧತೆಗಳು ಅಂತಿಮ ಹಂತ ತಲುಪಿದ್ದು, ನಗರದಲ್ಲಿ ಭದ್ರತಾ ವ್ಯವಸ್ಥೆಯನ್ನು ಬಿಗಿಗೊಳಿಸಲಾಗಿದೆ.

ದೀಪೋತ್ಸವದ ಸುಗಮ ಮತ್ತು ಸುರಕ್ಷಿತ ಆಯೋಜನೆಗಾಗಿ ಜಿಲ್ಲಾಡಳಿತ ಹಾಗೂ ಪೊಲೀಸ್ ಅಧಿಕಾರಿಗಳು ಸಭೆ ನಡೆಸಿ ಅಗತ್ಯ ಸೂಚನೆಗಳನ್ನು ನೀಡಿದ್ದಾರೆ. ಕಣ್ಗಾವಲಿಗಾಗಿ ಡ್ರೋನ್‌ಗಳು, ಸಿಸಿಟಿವಿ ಕ್ಯಾಮೆರಾಗಳನ್ನು ಬಳಸಲಾಗುತ್ತಿದ್ದು,

ನಿಯಂತ್ರಣ ಕೊಠಡಿಯಿಂದ ಭದ್ರತಾ ವ್ಯವಸ್ಥೆಯನ್ನು ಮೇಲ್ವಿಚಾರಣೆ ಮಾಡಲಾಗುತ್ತಿದೆ. ರಾಷ್ಟ್ರೀಯ ಭದ್ರತಾ ಪಡೆ ಮತ್ತು ಉತ್ತರ ಪ್ರದೇಶದ ಭಯೋತ್ಪಾದನಾ ನಿಗ್ರಹ ದಳದ ಸಿಬ್ಬಂದಿಯೂ ಕಟ್ಟೆಚ್ಚರ ವಹಿಸಲಿದ್ದಾರೆ.

ಇದೇ ವೇಳೆ, ರಾಮಾಯಣದ ಸನ್ನಿವೇಶಗಳು, ವಿಕಸಿತ ಭಾರತ ೨೦೪೭ರ ಪರಿಕಲ್ಪನೆ, ಬ್ರಹ್ಮೋಸ್ ಕ್ಷಿಪಣಿ ಹಾಗೂ ಉತ್ತರ ಪ್ರದೇಶದ ಅಭಿವೃದ್ಧಿಯನ್ನು ಬಿಂಬಿಸುವ ಸ್ತಬ್ಧಚಿತ್ರಗಳನ್ನು ಸಿದ್ಧಪಡಿಸಲಾಗುತ್ತಿದೆ. ಭಗವಾನ್ ಶ್ರೀರಾಮ, ಸೀತೆ, ಲಕ್ಷ್ಮಣ ಮತ್ತು ಹನುಮಂತರು ಇರುವ ರಥದ ನಿರ್ಮಾಣ ಕಾರ್ಯವೂ ಅಂತಿಮ ಹಂತದಲ್ಲಿದೆ.

_____ ಮುಕ್ತಾಯ _____